ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಕಾಲಮಿತಿ ವೇತನ ಬಡ್ತಿ ಮಂಜೂರಾತಿ ಕುರಿತು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

974 (1186) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಪಡೆದ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಡ್ತಿ ಪಡೆದ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ನೀಡದೇ ಇರುವುದರಿಂದ ಇವರು ಆರ್ಥಿಕ ಸವಲತ್ತಿನಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯಲ್ಲಿ ವೇತನ ಬಡ್ತಿ ಸೌಲಭ್ಯ ಕಲ್ಪಿಸಲಾಗುವುದು?